




# ಸಂಜಿತ್ ಪ್ರೇಮಗಾನ

'ಗೀಜಗ ಹಕ್ಕಿ ಸುಳ್ ನೇಯೋದಿಲ್ವಂತೆ' ಎಂದು ಈಚೆಗೆ ಕೋಕ್ ಸ್ಟುಡಿಯೊ ಭಾರತ್‌ನಲ್ಲಿ ಹಾಡಿ ರಂಜಿಸಿದ ಕನ್ನಡದ ಸ್ಟಾರ್ ಸಿಂಗರ್ ಸಂಜಿತ್ ಹೆಗಡೆ ಈಗ ಅಂಥದ್ದೇ ಮತ್ತೊಂದು ಪ್ರಯತ್ನ ಮಾಡಿದ್ದಾರೆ.

'ನಂಗೆ ಅಲ್ಲವಾ' ಎಂದು ಹಾಡು ಹಾಡುತ್ತಾ ರೊಮ್ಯಾಂಟಿಕ್ ಆಗಿ ನಟಿ ಸಂಜನಾ ದಾಸ್ ಜೊತೆ ಕಾಣಿಸಿಕೊಂಡಿದ್ದಾರೆ. ಈ ಹಾಡು ಯಾವುದೇ ಸಿನಿಮಾಗೆ ಸಂಬಂಧಿಸಿದ್ದಲ್ಲ. ಸಂಜಿತ್ ತಮ್ಮ ತಂಡದೊಂದಿಗೆ ಸೇರಿ ಸ್ವತಂತ್ರವಾಗಿ ಹೆಣೆದಿರುವ ಹಾಡು. ನಾಗಾರ್ಜುನ್ ಶರ್ಮಾ ಸಾಹಿತ್ಯಕ್ಕೆ ಸಂಜಿತ್ ಹೆಗಡೆ ಅವರು ಕಂಠ ಕೊಟ್ಟಿದ್ದಾರೆ. ಸಂಗೀತ ಸಂಯೋಜನೆಯನ್ನೂ ಮಾಡಿದ್ದಾರೆ. ಬಿಜೋಯ್ ಶೆಟ್ಟಿ ನಿರ್ದೇಶನದಲ್ಲಿ ಈ ಹೊಸ ಹಾಡು ಮೂಡಿಬಂದಿದೆ.


ಸಂಜಿತ್ ಹೆಗಡೆ

ಈ ಹಾಡಿನ ಬಗ್ಗೆ ಸಂಜಿತ್ ಬಹಳ ಖುಷಿಯಿಂದ ಮಾತನಾಡಿದ್ದಾರೆ. ಪ್ರೇಮಿಗಳ ಮನದಾಳ ತೆರೆದಿಡುವ ಈ ಹಾಡು, ಯುವ ಪ್ರೇಮಿಗಳ ಆ್ಯಂಥೆಮ್‌ನಂತಿದೆ ಎಂದೂ ಹೇಳಿದ್ದಾರೆ.

"ನಂಗೆ ಅಲ್ಲವಾ' ಎಂಬ ಈ ಹಾಡು ಪ್ರೀತಿಯ ಜೀವನದ ಪಯಣವನ್ನು ಬಹಳ ಸುಂದರವಾಗಿ ವ್ಯಕ್ತಪಡಿಸುತ್ತದೆ. ಈ ಹಾಡಿನಲ್ಲಿ, ಈ ಪ್ರಯಾಣದಲ್ಲಿ ಭಾಗವಾಗಿರುವ ಪ್ರತಿಯೊಬ್ಬರಿಗೂ ನಾನು ತುಂಬಾ ಕೃತಜ್ಞ. ಈ ಹಾಡಿನೊಂದಿಗೆ ಹೃದಯ ತುಂಬಾ ಹಗುರ ಎನಿಸುತ್ತದೆ' ಎಂದಿದ್ದಾರೆ.

ಕನ್ನಡಕ್ಕೆ ಸೀಮಿತವಾಗದೇ ತಮಿಳು, ತೆಲುಗು ಹಾಗೂ ಹಿಂದಿ ಚಿತ್ರರಂಗದಲ್ಲಿಯೂ ತಮ್ಮ ಗಾಯನದ ಮೂಲಕ ಸಂಗೀತಪ್ರಿಯರನ್ನು ರಂಜಿಸುತ್ತಿದ್ದಾರೆ ಸಂಜಿತ್.

ಕನ್ನಡದ ರಿಯಾಲಿಟಿ ಶೋ ಮೂಲಕ ಬೆಳಕಿಗೆ ಬಂದ ಸಂಜಿತ್ ಅತಿ ಕಡಿಮೆ ಅವಧಿಯಲ್ಲೇ ಜನಪ್ರಿಯತೆ ಗಿಟ್ಟಿಸಿಕೊಂಡವರು. ಹಿಂದಿಯಲ್ಲಿ 'ಬಾದಲ್' ಮತ್ತು 'ಗುಲಾಬೋ' ಹಾಡುಗಳೊಂದಿಗೆ ಈಗಾಗಲೇ ಹೊಸ ಅಲೆ ಸೃಷ್ಟಿಸಿರುವ ಅವರ ಹಾಡುಗಳ ಸಾಲಿಗೆ ಈಗ 'ನಂಗೆ ಅಲ್ಲವಾ' ಹಾಡು ಸೇರ್ಪಡೆಯಾಗಿದೆ.

'ಸಂಜಿತ್ ಹೆಗಡೆ ಯೂಟ್ಯೂಬ್ ಚಾನಲ್'ನಲ್ಲಿ ಹಾಗೂ ಎಲ್ಲಾ ಸ್ಟ್ರೀಮಿಂಗ್ ಪ್ಲಾಟ್‌ಫಾರ್ಮ್‌ಗಳಲ್ಲಿ ಹಾಡು ಲಭ್ಯವಿದೆ. ವಾರ್ನರ್ ಮ್ಯೂಸಿಕ್ ಇಂಡಿಯಾ ಈ ಹಾಡನ್ನು ಬಿಡುಗಡೆ ಮಾಡಿದೆ. ■

# ಕೃಷ್ಣ-ಶಶಾಂಕ್ ಕಾಂಬಿನೇಷನ್‌ನಲ್ಲಿ ಮತ್ತೊಂದು ಕಥೆ

'ಮೊಗ್ಗಿನ ಮನಸು', 'ಕೃಷ್ಣನ್ ಲವ್ ಸ್ಟೋರಿ', 'ಕೃಷ್ಣ ಲೀಲಾ', 'ಲವ್ 360'... ಹೀಗೆ ಸಾಲು ಸಾಲು ಪ್ರೇಮಕಥೆಗಳ ಮೂಲಕ ಪ್ರೇಕ್ಷಕರನ್ನು ರಂಜಿಸಿದ್ದ ನಿರ್ದೇಶಕ ಶಶಾಂಕ್, ಈಗ ಮತ್ತೊಂದು ಕಥೆಯೊಂದಿಗೆ ರೆಡಿಯಾಗಿದ್ದಾರೆ.

ನಟ ಡಾರ್ಲಿಂಗ್ ಕೃಷ್ಣ ಅವರಿಗೆ ಮತ್ತೊಮ್ಮೆ ಆ್ಯಕ್ಷನ್ ಕಟ್ ಹೇಳಲಿದ್ದು, 'ಕೌಸಲ್ಯಾ ಸುಪ್ರಜಾ ರಾಮ' ಸಿನಿಮಾ ಬಳಿಕ ಇದೇ ಕಾಂಬಿನೇಷನ್‌ನಲ್ಲಿ ಮತ್ತೊಂದು ಚಿತ್ರ ಮೂಡಿಬರುತ್ತಿದೆ.

"ನಮ್ಮ ಕಾಂಬಿನೇಷನ್‌ನಲ್ಲಿ ಮೂಡಿಬಂದ 'ಕೌಸಲ್ಯಾ ಸುಪ್ರಜಾ ರಾಮ' ಸಿನಿಮಾಗೆ ಪ್ರೇಕ್ಷಕರು ತೋರಿದ ಪ್ರೀತಿ, ಬೆಂಬಲಕ್ಕೆ ಧನ್ಯವಾದ. ಇದೀಗ ನಾವು ಮತ್ತೆ ಹೊಸ ಸಿನಿಮಾದೊಂದಿಗೆ ಬರುತ್ತಿದ್ದೇವೆ" ಎಂದಿದ್ದಾರೆ ಶಶಾಂಕ್. ಜೊತೆಗೆ ಈ ಸಿನಿಮಾ ಪ್ಯಾನ್ ಇಂಡಿಯಾ ಆಗಿರುವುದಾಗಿಯೂ ತಿಳಿಸಿದ್ದಾರೆ. ಸದ್ಯ ಡಾರ್ಲಿಂಗ್ ಕೃಷ್ಣ, ನಿರ್ದೇಶಕ ಆರ್. ಚಂದ್ರು ನಿರ್ಮಾಣ ಮಾಡುತ್ತಿರುವ, ರಾಜ್ ಮೋಹನ್ ಆ್ಯಕ್ಷನ್ ಕಟ್ ಹೇಳುತ್ತಿರುವ 'ಫಾದರ್' ಸಿನಿಮಾದಲ್ಲಿ ನಟಿಸುತ್ತಿದ್ದಾರೆ. ಇದು ಪೂರ್ಣಗೊಂಡ ಬಳಿಕ ಹೊಸ ಸಿನಿಮಾ ಸೆಟ್ಟೇರಲಿದೆ.

'ಕೌಸಲ್ಯಾ ಸುಪ್ರಜಾ ರಾಮ' ಸಿನಿಮಾದಲ್ಲಿ ಹೊಸ ಬಗೆಯ ಕಥೆಯನ್ನು ಪ್ರೇಕ್ಷಕರ ಎದುರಿಗೆ ಇರಿಸಿದ್ದ ಶಶಾಂಕ್ ಈ ಸಿನಿಮಾದಲ್ಲಿ ಯಾವ ರೀತಿಯ ಕಥೆಯಿಂದ ಜನರ ಮುಂದೆ ಬರಲಿದ್ದಾರೆ ಎಂಬ ಕುತೂಹಲವೂ ತುಂಬಿದೆ. ■

